ಪಶು ಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು 38 ಪ್ರಸ್ತಾವನೆಗಳಿವೆ. ಪ್ರಸಕ್ತ ಸಾಲಿನಲ್ಲಿ 100 ಹೊಸ ಪಶು ಚಿಕಿತ್ಸಾಲಯಗಳನ್ನು ತೆರೆಯಲು ಹಾಗೂ 100 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲು ಮಂಜೂರಾತಿ ನೀಡಲಾಗಿದೆ. ಸ್ಥಳ ಗುರುತಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ.

ಆ) 2014–15ನೇ ಸಾಲಿಗೆ 100 ಹೊಸ ಪಶು ಚಿಕಿತ್ಸಾಲಯಗಳನ್ನು ತೆರೆಯಲು ಹಾಗೂ 100 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಪಾಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲು ಸ್ಥಳ ಗುರುತಿಸಿದ ನಂತರ ವಂಟನ ಬಿಡುಗಡೆ ಹಾಗೂ ಇನ್ನಿತರೆ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು.

ಇ) ಪ್ರಸ್ತುತ ಅನ್ವಯಿಸುವುದಿಲ್ಲ.

ರೇಷ್ಮೆ ಬೆಳೆಗಾರರಿಗೆ ಸಂಪರ್ಕ ಕೇಂದ್ರ ನಿರ್ಮಾಣ

3 (104); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ಬೆಳಗಾವಿ ಜಿಲ್ಲೆಯಲ್ಲಿ ರೇಷ್ಮೆ ಬೆಳೆಯನ್ನು ಎಲ್ಲೆಲ್ಲಿ ಹಾಗೂ ಎಷ್ಟು ಎಕರೆ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ;

ಆ) ರೈತರು ಬೆಳೆದ ರೇಷ್ಮೆಗೆ ಮಾರುಕಟ್ಟೆಯಲ್ಲಿ ಮಧ್ಯವರ್ತಿಗಳ ಹಾವಳಿಯಿಂದ ನ್ಯಾಯಯುತವಾದ ಬೆಲೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು;

ಈ) ಸರ್ಕಾರದಿಂದ ನಿಗದಿಪಡಿಸಿರುವ ರೂಪರೇಷೆಗಳ ಅನುಗುಣವಾಗಿ ಒದಗಿಸುತ್ತಿರುವ ಸೌಲಭ್ಯಗಳು ರೇಷ್ಮೆ ಬೆಳೆಗಾರರಿಗೆ ಸಮರ್ಪಕವಾಗಿ ಮುಟ್ಟಲು ಸರ್ಕಾರ ಕೈಗೊಂಡ ಕ್ರಮವೇನು;

ಉ) ರೇಷ್ಮೆ ಬೆಳೆಗಾರರಿಗೆ ಮಾಹಿತಿ ನೀಡಲು ಸಂಪರ್ಕ ಕೇಂದ್ರ ನಿರ್ಮಿಸುವ ಉದ್ದೇಶ ಸರ್ಕಾರದ ಮುಂದಿದೆಯೇ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)

ಅ) ಬೆಳಗಾವಿ ಜಿಲ್ಲೆಯಲ್ಲಿ 1520 ಎಕರೆ ಪ್ರದೇಶದಲ್ಲಿ ಹಿಪ್ಪುನೇರಳೆ ಬೆಳೆಯಲಾಗುತ್ತಿದೆ. ತಾಲ್ಲೂಕುವಾರು ವಿವರಗಳು ಕೆಳಕಂಡಂತಿದೆ.

ಕ್ರ. ಸಂ.	ತಾಲ್ಲೂಕು	ಹಿಪ್ಪುನೇರಳೆ ವಿಸ್ತೀರ್ಣ (ಎಕರೆಗಳಲ್ಲಿ)
1	ಅಥಣಿ	241
2	ಬೈಲಹೊಂಗಲ	87
3	ಬೆಳಗಾವಿ	81
4	ಚಿಕ್ಕೋಡಿ	237
5	ಗೋಕಾಕ	214
6	ಹುಕ್ಕೇರಿ	227
7	ಖಾನಾಪುರ	30
8	ರಾಯಭಾಗ	106
9	ರಾಮದುರ್ಗ	101
10	ಸವದತ್ತಿ	196
ಒಟ್ಟು		**1520**

ಆ) ರೇಷ್ಮೆ ಬೆಳೆಗಾರರು ಬೆಳೆದ ಗೂಡನ್ನು ಬಹಿರಂಗ ಹರಾಜಿನಲ್ಲಿ ಮಾರಾಟ ಮಾಡುತ್ತಿರುವುದರಿಂದ ಪ್ರೋತ್ಸಾಹಕ ದರಗಳು ದೊರೆಯುತ್ತಿವೆ. ಇಲ್ಲಿ ಮಧ್ಯವರ್ತಿಗಳ ಹಾವಳಿಗೆ ಆಸ್ಪದವಿಲ್ಲ.

ಇ) ಪ್ರಸ್ತುತ ರೇಷ್ಮೆ ಗೂಡು ಮಾರುಕಟ್ಟೆಯಲ್ಲಿ ಬಹಿರಂಗ ಹರಾಜು ವ್ಯವಸ್ಥೆಯಿದೆ. ಮಾರಾಟ ವ್ಯವಸ್ಥೆಯಲ್ಲಿ ಪಾರದರ್ಶಕವಾದ ಇ–ಟೆಂಡರ್ ಹರಾಜು ಪದ್ಧತಿಯನ್ನು ಜಾರಿಗೆ ತರಲು ಕಾರ್ಯಕ್ರಮ ರೂಪಿಸಿದೆ. ಪ್ರಾಯೋಗಿಕವಾಗಿ ಕೊಳ್ಳೆಗಾಲ ಗೂಡು ಮಾರುಕಟ್ಟೆಯಲ್ಲಿ ಇ–ಟೆಂಡರ್ ಹರಾಜು ಪದ್ಧತಿಯನ್ನು ಪೈಲೈಟ್ ಆಧಾರದ ಮೇಲೆ ಅಳವಡಿಸಲು ಯೋಜಿಸಲಾಗಿದೆ.

ಈ) ಸರ್ಕಾರವು ನಿಗದಿಪಡಿಸಿರುವ ರೂಪರೇಷೆಗಳಿಗೆ ಅನುಗುಣವಾಗಿ ನೀಡುತ್ತಿರುವ ಸೌಲಭ್ಯಗಳು ರೇಷ್ಮೆ ಬೆಳೆಗಾರರಿಗೆ ಸಮರ್ಪಕವಾಗಿ ಮುಟ್ಟಲು ಇಲಾಖೆಯ 10 ಸೇವೆಗಳನ್ನು ಸಕಾಲ ಕಾರ್ಯಕ್ರಮದಡಿ ಗುರುತಿಸಲಾಗಿದೆ ಹಾಗೂ ಇಲಾಖೆಯಲ್ಲಿ ಸಮಗ್ರ ಗಣಕೀಕರಣ ಕೈಗೊಳ್ಳಲು ಕ್ರಮ ಜರುಗಿಸಲಾಗಿದೆ.

ಉ) ರೇಷ್ಮೆ ವ್ಯವಸಾಯವನ್ನು ಕೈಗೊಳ್ಳುವ ರೈತರಿಗೆ ಮಾಹಿತಿ ನೀಡಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

1. ರಾಜ್ಯದಲ್ಲಿ 246 ತಾಂತ್ರಿಕ ಸೇವಾ ಕೇಂದ್ರಗಳನ್ನು ವಿವಿಧ ಜಿಲ್ಲೆ/ತಾಲ್ಲೂಕುಗಳ ಅವಶ್ಯಕತೆಗೆ ಅನುಗುಣವಾಗಿ ತೆರೆಯಲಾಗಿದೆ.
2. ರೇಷ್ಮೆ ಕೃಷಿ ಕುರಿತು ಹಿಪ್ಪುನೇರಳೆ ವ್ಯವಸಾಯ ಹಾಗೂ ಹುಳು ಸಾಕಾಣಿಕೆ ಬಗ್ಗೆ ತಾಂತ್ರಿಕ ಮಾಹಿತಿಯನ್ನು ಒಳಗೊಂಡ ಬ್ರೋಚರ್ಸ್, ಕರಪತ್ರ, ಕೈಪಿಡಿ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ.
3. ರೇಷ್ಮೆ ಕೃಷಿ ದ್ವೈಮಾಸಿಕ ತಾಂತ್ರಿಕ ಪತ್ರಿಕೆಯಲ್ಲಿ ರೈತರ ಅನುಭವ, ನೂತನ ಆವಿಷ್ಕಾರ, ತಾಂತ್ರಿಕತೆ ಮುಂತಾದ ವಿವರಗಳನ್ನು ಒದಗಿಸಲಾಗುತ್ತಿದೆ.
4. ಸಮೂಹ ಮಾಧ್ಯಮಗಳಾದ ಆಕಾಶವಾಣಿ ಮತ್ತು ದೂರದರ್ಶನದ ಮೂಲಕ ತಜ್ಞರ ಸಂದರ್ಶನ/ವಿಚಾರಗೋಷ್ಠಿ ಹಾಗೂ ಫ್ಲಾಶ್ ಸುದ್ದಿಗಳನ್ನು ನಿಯಮಿತವಾಗಿ ಪ್ರಸಾರ ಮಾಡಲಾಗುತ್ತಿದೆ.
5. ಕ್ಷೇತ್ರಮಟ್ಟದಲ್ಲಿ ಕ್ಷೇತ್ರೋತ್ಸವ, ಪ್ರಾತ್ಯಕ್ಷತೆ, ವಸ್ತುಪ್ರದರ್ಶನ, ವಿಚಾರಗೋಷ್ಠಿ ಮತ್ತು ಕಾರ್ಯಾಗಾರಗಳನ್ನು ನಡೆಸಲಾಗುತ್ತಿದೆ.

6. ರೇಷ್ಮೆ ಕೃಷಿಕರಿಗೆ ಇಲಾಖೆಯ ರೇಷ್ಮೆ ತರಬೇತಿ ಸಂಸ್ಥೆಗಳಲ್ಲಿ ತರಬೇತಿ / ಅಧ್ಯಯನ ಪ್ರವಾಸವನ್ನು ಆಯೋಜಿಸಲಾಗುತ್ತಿದೆ.
7. ಭಾಗೀದಾರರನ್ನು ಪ್ರೋತ್ಸಾಹಿಸಲು ರಾಜ್ಯ/ಜಿಲ್ಲಾ ಮಟ್ಟದ ವಾರ್ಷಿಕ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ.
8. ಇಲಾಖೆಯ ಸಮಗ್ರ ಗಣಕೀಕರಣ ಕಾರ್ಯಕ್ರಮದಡಿ ಸಹಾಯವಾಣಿ ಕೇಂದ್ರವನ್ನು ತೆರೆಯಲು ಉದ್ದೇಶಿಸಿದೆ.

ಸವದತ್ತಿ ಯಲ್ಲಮ್ಮ ದೇವಸ್ಥಾನಕ್ಕೆ ಮೂಲಭೂತ ಸೌಲಭ್ಯ ಒದಗಿಸುವುದು

4 (305); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ

ಅ) ಬೆಳಗಾವಿ ಜಿಲ್ಲೆಯ ಯಲ್ಲಮ್ಮ ಸವದತ್ತಿ ದೇವಸ್ಥಾನವು ರಾಜ್ಯದಲ್ಲೇ ಅತೀ ದೊಡ್ಡ ಯಾತ್ರಾ ಸ್ಥಳವಾಗಿದ್ದು ಅಲ್ಲಿನ ಜೋಗುಳ ಬಾವಿಯು ಸಹ ಒಂದು ಪುಣ್ಯ ಸ್ಥಳವಾಗಿದ್ದು ಅದು ಸದ್ಯ ಮಲೀನವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

ಇ) ಯಲ್ಲಮ್ಮ ಸವದತ್ತಿ ದೇವಸ್ಥಾನಕ್ಕೆ ಪ್ರತಿನಿತ್ಯ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ಬರುತ್ತಿದ್ದು ಮೂಲಭೂತ ಸೌಕರ್ಯಗಳಲ್ಲಿದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಸದರಿ ದೇವಸ್ಥಾನಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಮಲೀನವಾಗಿರುವ ಜೋಗುಳ ಬಾವಿಯನ್ನು ಸ್ವಚ್ಚಗೊಳಿಸಲು ಸರ್ಕಾರ ಕೂಡಲೇ ಅನುದಾನ ಬಿಡುಗಡೆಗೊಳಿಸುವುದೇ?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನಾ ಹಾಗೂ ಮುಜರಾಯಿ ಸಚಿವರು)